ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತಮೂರನೆಯ ಅಧಿವೇಶನ

ಮಂಗಳವಾರ, ದಿನಾಂಕ: 2ನೇ ಫೆಬ್ರುವರಿ, 2021

ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಬಗ್ಗೆ

ಶ್ರೀ ಎನ್. ಅಪ್ಪಾಜಿ ಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) :-

164(74) ಮಾನ್ಯ ಗಣಿ ಮತ್ತು ಭೂ ವಿಜ್ಞಾನ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ:-

(ಅ) ಮಂಡ್ಯ ಜಿಲ್ಲೆ ವ್ಯಾಪ್ತಿಯಲ್ಲಿ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳೇಷ್ಟು; ಇಂತಹ ಪ್ರಕರಣಗಳ ವಿರುದ್ಧ ಇಲಾಖೆ ಅಥವಾ ಸರ್ಕಾರ ಯಾವ ಕ್ರಮ ಕೈಗೊಂಡಿದೆ; (ತಾಲ್ಲೂಕುವಾರು ವಿವರ ನೀಡುವುದು)

(ಅ) ನಾಗಮಂಗಲ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯಲ್ಲಿ ನಡೆಯುತ್ತಿರುವ ಗಣಿಗಾರಿಕೆ ನಡೆಯುತ್ತಿರುವ ಪ್ರದೇಶಗಳಲ್ಲಿ ಸರ್ಕಾರಿ ಮತ್ತು ಅರಣ್ಯ ಪ್ರದೇಶವನ್ನು ಅತಿಕ್ರಮಿಸಿ ಗಣಿಗಾರಿಕೆ ಮಾಡುತ್ತಿರುವ ಪ್ರಕರಣಗಳಲ್ಲಿ ಎಷ್ಟು ಪ್ರಕರಣಗಳಿಗೆ ಈವರೆಗೆ ದಂಡ ವಿಧಿಸಲಾಗಿದೆ; (ಪ್ರತಿಗಳನ್ನು ನೀಡುವುದು) ಅತಿಕ್ರಮಣ ಮಾಡಿರುವ ಪ್ರದೇಶವನ್ನು ಸರ್ಕಾರ ವಾಪಸ್ ಪಡೆಯಲು ತೆಗೆದುಕೊಂಡ ಕ್ರಮಗಳೇನು; ತಪ್ಪಿತಸ್ಥ ಇಲಾಖಾ ಅಧಿಕಾರಿಗಳು ಮತ್ತು ಗಣಿಗಾರಿಕೆ ನಡೆಸುತ್ತಿರುವವರ ವಿರುದ್ಧ ಯಾವ ಕ್ರಮ ಕೈಗೊಳ್ಳಲಾಗಿದೆ ? (ಸಂಪೂರ್ಣ ವಿವರ ನೀಡುವುದು)